# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 459

ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು))

ಉತ್ತರಿಸಬೇಕಾದ ದಿನಾಂಕ : 13.12.2018

ಉತ್ತರಿಸುವ ಸಚಿವರು : ಮುಖ್ಯಮಂತ್ರಿಯವರು

**********

| | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಹಾಗೂ ಭೂಕುಸಿತದಿಂದ ವಿದ್ಯುತ್ ಸಂಪರ್ಕ ವ್ಯವಸ್ಥೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, |
| ಆ) | ಬಂದಿದ್ದಲ್ಲಿ, ಹಾನಿಗೀಡಾಗಿರುವ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ಇದುವರೆಗೂ ಕೈಗೊಂಡಿರುವ ಕ್ರಮಗಳೇನು; | ಪ್ರವಾಹ ಹಾಗೂ ಭೂಕುಸಿತದಿಂದ ಕೊಡಗು ಜಿಲ್ಲೆಯಲ್ಲಿ ಈವರೆವಿಗೂ ಹಾನಿಗೀಡಾಗಿದ್ದ 4269 ವಿದ್ಯುತ್ ಕಂಬಗಳು, 362 ಸಂಖ್ಯೆಯ ವಿವಿಧ ಸಾಮರ್ಥ್ಯದ ವಿತರಣಾ ಪರಿವರ್ತಕಗಳು, 65.69 ಕಿ.ಮೀ ವಿದ್ಯುತ್ ವಾಹಕ ಹಾಗೂ ಇತರೆ ಅವಶ್ಯ ವಿದ್ಯುತ್ ಪರಿಕರಗಳನ್ನು ಬದಲಾಯಿಸಲಾಗಿದ್ದು, ಕೊಡಗು ಜಿಲ್ಲೆಯಾದ್ಯಂತ ಹಾನಿಗೀಡಾಗಿದ್ದ ವಿದ್ಯುತ್ ಜಾಲವನ್ನು ಮರುಸ್ಥಾಪಿಸಲು ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಿ, ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ.<br><br>ಆದರೆ, ಕೆಲವೊಂದು ಪ್ರದೇಶಗಳಲ್ಲಿ ರಸ್ತೆಗಳು ಸಂಪೂರ್ಣ ಹಾನಿಗೊಳಗಾಗಿದ್ದು, ಬೆಟ್ಟಗುಡ್ಡಗಳು ಜಾರಿ ಕರಗಿರುವ ಸ್ಥಳಗಳಿಗೆ ಸಿಬ್ಬಂದಿಗಳು ತಲುಪಲು ಸಾಧ್ಯವಾಗದಿರುವ ಪ್ರದೇಶಗಳಿಗೆ ಅನ್ಯ ಮಾರ್ಗಗಳಿಂದ ವಿದ್ಯುತ್ ಸಂಪರ್ಕವನ್ನು ಪುನರ್ ಸ್ಥಾಪಿಸಲು ಆದ್ಯತೆ ಮೇಲೆ ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಹಾನಿಗೀಡಾಗಿರುವ ವಿದ್ಯುತ್ ಸಂಪರ್ಕ ವ್ಯವಸ್ಥೆ ಪುನರ್ ನಿರ್ಮಾಣಕ್ಕೆ ಇಲಾಖೆಯಿಂದ ವಿಶೇಷ ಅನುದಾನ ಒದಗಿಸಿ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದೇ? | ಕೊಡಗು ಜಿಲ್ಲೆಯಲ್ಲಿ ಹಾನಿಗೀಡಾದ ವಿದ್ಯುತ್ ಸಂಪರ್ಕ ವ್ಯವಸ್ಥೆ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು ಕೊಡಗು ಜಿಲ್ಲಾಡಳಿತದಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಕ್ಕೆ ರೂ 25 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ. ಅಲ್ಲದೇ, ಕಂದಾಯ ಇಲಾಖೆಯ ವತಿಯಿಂದ ವಿಪತ್ತು ನಿರ್ವಹಣೆಯಡಿ ನೀಡಲಾಗಿದ್ದ ಅನುದಾನದಲ್ಲಿ ರೂ.2.06 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದೆ.<br><br>ಈಗಾಗಲೇ ಹಾನಿಗೀಡಾಗಿದ್ದ ಬಹುತೇಕ ಭಾಗಗಳಿಗೆ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ಸರಿಪಡಿಸಿ ವಿದ್ಯುತ್ ಸಂಪರ್ಕವನ್ನು ಪುನರ್ ಸ್ಥಾಪಿಸಲಾಗಿರುತ್ತದೆ. ರಸ್ತೆ ಸಂಪರ್ಕ ವ್ಯವಸ್ಥೆಯು ಸಂಪೂರ್ಣವಾಗಿ ಹಾನಿಗೊಳಗಾಗಿರುವೆಡೆ, ಇಲಾಖಾ ಸಿಬ್ಬಂದಿಯು ತಲುಪಲು ಸಾಧ್ಯವಾಗದಿರುವ ಪ್ರದೇಶಗಳಿಗೆ ಅನ್ಯ ಮಾರ್ಗಗಳ ಮೂಲಕ ವಿದ್ಯುತ್ ಜಾಲವನ್ನು ಪುನರ್ ಸ್ಥಾಪಿಸಿ ವಿದ್ಯುತ್ ಸಂಪರ್ಕ ನೀಡಲು ಆದ್ಯತೆ ಮೇಲೆ ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಇಎನ್ 233 ಇಬಿಎಸ್ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ